ಕೃಷಿ ವಿಶ್ವ ವಿದ್ಯಾನಿಲಯ
**ಕೃಷಿ ಹವಾಮಾನ ಕ್ಷೇತ್ರ ವಿಭಾಗ (IMD)**
**ಜಿ.ಕೆ.ವಿ.ಕೆ., ಬೆಂಗಳೂರು-560065**
*** ಗ್ರಾಮೀಣ ಕೃಷಿ ಹವಾಮಾನ ಸೇವಾ ವರದಿ ಪತ್ರಿಕೆ ***

**ದಿನಾಂಕ:** 17.03.2020

ಬೆಂಗಳೂರು ಗ್ರಾಮಾಂತರ ಜಿಲ್ಲೆಗೆ ಸೀಮಿತವಾಗಿದೆ
**ಈ ವಾರದ ಹವಾಮಾನ ಮುನ್ಸೂಚನೆ(ಭಾರತೀಯ ಹವಾಮಾನ ಇಲಾಖೆ)**
(ದಿನಾಂಕ **18-03-2020 - 22-03-2020** ವರೆಗೆ)

| ನಿಯತಾಂಕಗಳು | 18.3.20 | 19.3.20 | 20.3.20 | 21.3.20 | 22.3.20 |
|---|---|---|---|---|---|
| ಮಳೆ (ಮಿ ಮಿ) | 0 | 0 | 0 | 0 | 0 |
| ಗರಿಷ್ಠ ಉಷ್ಣಾಂಶ(ಡಿ.ಸೆ.) | 34 | 34 | 33 | 33 | 34 |
| ಕನಿಷ್ಠ ಉಷ್ಣಾಂಶ(ಡಿ.ಸೆ.) | 20 | 20 | 20 | 20 | 20 |
| ಮೋಡ ( ಪ್ರಮಾಣ) | 2 | 2 | 2 | 2 | 2 |
| ಅರ್ದ್ರತೆ ೭.೨೦ ಬೆ (ಶೇ) | 60 | 60 | 58 | 58 | 58 |
| ಅರ್ದ್ರತೆ ೨.೨೦ ಮ (ಶೇ) | 23 | 23 | 25 | 25 | 25 |
| ಗಾಳಿಯ ವೇಗ(ಕಿ.ಮಿ/ಗಂಟೆಗೆ) | 4 | 3 | 3 | 3 | 3 |
| ಗಾಳಿಯ ದಿಕ್ಕು ( ಡಿಗ್ರಿ) | 117 | 120 | 120 | 202 | 130 |

ಭಾರತೀಯ ಹವಾಮಾನ ಇಲಾಖೆಯ ಪ್ರಕಾರ ಮುಂದಿನ ನಾಲ್ಕೈದು ದಿನಗಳಲ್ಲಿ ತುಂತುರು ಮಳೆಯಾಗುವ ಸಂಭವವಿದೆ. ದಿನದ ಗರಿಷ್ಠ ಉಷ್ಣಾಂಶ **33.0-34.0$^{o}$C** ಮತ್ತು ಕನಿಷ್ಠ **20.0$^{o}$C** ಇರುವ ಸಾಧ್ಯತೆ ಇದೆ. ಬೆಳಗಿನ ಆರ್ದ್ರತೆ ಪ್ರಮಾಣ ಶೇ **58-60 %** ಇದ್ದು ಮಧ್ಯಾಹ್ನ **23-25 %** ಇರುವುದು ಮತ್ತು ಗಾಳಿಯು ಗಂಟೆಗೆ ಸರಾಸರಿ 3-4 ಕಿ.ಮೀ. ವೇಗದಲ್ಲಿ ಬೀಸುವ ಸಂಭವವಿದೆ.

- ಉತ್ತರಭಾದ್ರ ನಕ್ಷತ್ರದ ಮಳೆಯ ಕಾಲವು ಮಾರ್ಚ್ ತಿಂಗಳ 18 ರಿಂದ ಮಾರ್ಚ್ 30 ರ ವರೆಗೆ ಇರುತ್ತದೆ. ಈ ನಕ್ಷತ್ರದ ಪೂರ್ವ ಒಣ ವಲಯದ ಸರಾಸರಿ ಮಳೆಯು 6.1 ಮಿ.ಮೀ. ವರೆಗೆ ಮಳೆಯಾಗುತ್ತದೆ.

**ಕೃಷಿ ಕಾರ್ಯಕ್ರಮಗಳ ಬಗ್ಗೆ ಅನುಸರಿಸಬೇಕಾದ ವಿವರ**

| ಬೆಳೆಗಳು | ಹವಾಮಾನ ಆಧಾರಿತ ಕೃಷಿ ಸಲಹೆಗಳು |
|---|---|
| ಸಾಮಾನ್ಯ | ➢ ಕಳೆದ ಮೂರು ತಿಂಗಳಿನಿಂದ ಒಣ ಹವೆ ಇರುವುದರಿಂದ ತೋಟಗಾರಿಕೆ ಬೆಳೆಗಳಲ್ಲಿ ಗೆದ್ದಲು ಹುಳುಗಳ ಭಾದೆಯು ಹೆಚ್ಚಾಗಿದ್ದು ಇದರ ಹತೋಟಿಗೆ ಆಲ್ಡರಿನ್ ಕೀಟನಾಶಕದಿಂದ ಉಪಚರಿಸಿ ಗೆದ್ದಲು ಹುಳುಗಳನ್ನು ನಿಯಂತ್ರಿಸಿ.<br>➢ ಮಾವು, ಹಲಸು, ಹುಣಸೆ, ಸಪೋಟ, ಬೆಟ್ಟದನೆಲ್ಲಿ ಹಾಗು ಅರಣ್ಯ ಬೆಳೆಗಳಾದ ಹೆಬ್ಬೇವು, ಬೇವು ಮುಂತಾದ ಮರಗಿಡಗಳಲ್ಲಿ ಗೆದ್ದಲು ಹುಳುಗಳ ಭಾದೆಯು ಹೆಚ್ಚಾಗಿದ್ದು ಇದರ ಹತೋಟಿಗೆ ಆಲ್ಡರಿನ್ ಕೀಟನಾಶಕದಿಂದ ಉಪಚರಿಸಿ ಗೆದ್ದಲು ಹುಳುಗಳನ್ನು ನಿಯಂತ್ರಿಸಿ.<br>➢ ದ್ವಿದಳದಾನ್ಯಗಳನ್ನು ಸಂಸ್ಕರಣಾ ಕೀಟಗಳಿಂದ ರಕ್ಷಿಸಲು ಎಣ್ಣೆಯ ಲೇಪನಮಾಡಿ ಸಂಗ್ರಹಿಸಬೇಕು (ಔಡಲ, ಅಗಸಿ, ಹೊಂಗೆ ಅಥವಾ ಬೇವಿನ ಎಣ್ಣೆ) ಪ್ರತಿ ಕಿ.ಗ್ರಾಂ ಬೀಜಕ್ಕೆ 3 ರಿಂದ 5 ಮಿ.ಲೀ. ಎಣ್ಣೆಯನ್ನು ಉಪಯೋಗಿಸಬೇಕು.<br>➢ ಕಟಾವು ಮಾಡಿದ ಬಿತ್ತನೆ ಬೀಜಗಳನ್ನು ಸರಿಯಾಗಿ ಒಣಗಿಸಬೇಕು. ಅಂದರೆ ಏಕದಳ ದಾನ್ಯಗಳು ತೇವಾಂಶ ಶೇ. 11 ರಿಂದ 12, ದ್ವಿದಳದಾನ್ಯಗಳ ತೇವಾಂಶ ಶೇ.9, ಎಣ್ಣೆಕಾಳುಗಳು ಶೇ.೮ ಮತ್ತು ತರಕಾರಿ ಬೀಜಗಳು ಶೇ.5 ರಿಂದ 6 ರಷ್ಟಿರಬೇಕು.ಇದರಿಂದ ಹೆಚ್ಚುದಿನ ಕೆಡದಂತೆ ಬೀಜಗಳನ್ನು ಸಂಸ್ಕರಣೆ ಮಾಡಬಹುದು ಜೊತೆಗೆ ಉಗ್ರಾಣ ಕೀಟದ ಬಾಧೆಯನ್ನು ಕಡಿಮೆಮಾಡಬಹುದು. |
| ತೊಗರಿ | ➢ ತೊಗರಿ ಕಟಾವನ್ನು ಮುಂದುವರಿಸಿ ಮತ್ತು ಕಟಾವಾದ ತೊಗರಿಯನ್ನು ಬಿಸಿಲಿನಲ್ಲಿ ಒಣಗಿಸಿ ಸಿಪ್ಪೆಯಿಂದ ಬೇರ್ಪಡಿಸಿ ಒಕ್ಕಣೆ ಮಾಡಿ ಚೀಲದಲ್ಲಿ ಶೇಖರಿಸಿ. |
| ಮಾವು | ➢ ಮಾವಿನಲ್ಲಿ ಕಾಯಿಗಳು ಉದುರುವುದನ್ನು ತಡೆಗಟ್ಟಲು ನ್ಯಾಪ್ತಲಿನ್ ಅಸಿಟಿಕ್ ಆಸಿಡ್ 20 ಪಿ.ಪಿ.ಎಮ್. 15 ದಿನಗಳಿಗೊಮ್ಮೆ 2 ಬಾರಿ ಕೊಡುವುದು<br>➢ ಮಾವು ಬೆಳೆಯಲ್ಲಿ ಕಾಯಿ ಉದುರುವುದು ಕಂಡು ಬಂದಿದೆ. ಮಾವಿನ ಬೆಳೆ ಕಾಯಿಕಟ್ಟುವ (ಗೊಟ್ಟಿ ಹಂತ) ಹಂತದಲ್ಲಿ ಇದ್ದು, ರೈತರು ತಪ್ಪದೆ ನೀರಿನ ನೀರುಣಿಸಬೇಕು. |

| | |
|---|---|
| | ➢ ನೀರಿನ ಅನುಕುಲತೆಗಳು ಹೆಚ್ಚಿಗೆ ಇದ್ದ ರೈತರು ಕಾಯಿಕಟ್ಟುವ ಹಂತದಿಂದ ಮಾಗುವ ಹಂತದವರೆಗೆ ಪ್ರತಿ 15-20 ದಿನಗಳಿಗೊಮ್ಮೆ ನೀರುಣಿಸಬೇಕು.<br>➢ ಹೂ ಬಿಡುವುದಕ್ಕೆ ಮುಂಚೆ ಹಾಗೂ ಕಾಯಿ ಕಚ್ಚಿದ ಕೂಡಲೇ ಜಿಗಿಹುಳು ಮತ್ತು ಬೂದಿರೋಗದ ನಿಯಂತ್ರಣಕ್ಕಾಗಿ ಗಿಡಗಳಿಗೆ 4ಗ್ರಾಂ ಕಾರ್ಬರಿಲ್ (50 wp) ಅಥವಾ 0.3 ಮಿ.ಲೀ ಇಮಿಡಾಕ್ಲೋಪ್ರಿಡ್ 200.ಎಸ್.ಎಲ್ ಅಥವಾ 0.5 ಮಿ.ಲೀ ಲ್ಯಾಂಬ್ಡಾ ಸೈಯೋಲೋಥ್ರಿನ್ (5 ಇಸಿ) ಜೊತೆಗೆ 3ಗ್ರಾಂ. ನೀರಿನಲ್ಲಿ ಕರಗುವ ಗಂಧಕ (ಸಲ್ ಟಾಫ್ 80wp) ಪ್ರತಿ ಲೀಟರ್ ನೀರಿನಲ್ಲಿ ಮಿಶ್ರ ಮಾಡಿ ಸಿಂಪಡಿಸಿ.<br>➢ ಜಿಗಿಹುಳುವಿನ ಹಾವಳಿ ತೀವ್ರವಾಗಿದ್ದಲ್ಲಿ ಅಝಾಡಿರೆಕ್ಟಿನ್ (10,000 ಪಿ.ಪಿ.ಎಮ್) 7 ಮಿ.ಲೀ/ಲೀ ನೀರಿನಲ್ಲಿ ಸಿಂಪಡಿಸಿ. |
| | **ಹೈನುಗಾರಿಕೆ** |
| **ಪಶುಸಂಗೋಪನೆ** | **ಬೇಸಿಗೆ ತಿಂಗಳಿನಲ್ಲಿ ಪಶು ಸಂಗೋಪನಾ ಸಲಹೆಗಳು :**<br>➢ ಬಿಸಿಲು ಹೆಚ್ಚಾಗಿರುವುದರಿಂದ ಹಸಿರು ಹುಲ್ಲಿನ ಅಭಾವ ಕಂಡುಬರುತ್ತದೆ ಆದುದರಿಂದ ಹಗೇವಿನಲ್ಲಿ ರಸಮೇವನ್ನು ತಯಾರಿಸಿ ಮತ್ತು ಒಣ ಹುಲ್ಲು ಮತ್ತು ಬೆಳೆಯ ಉಳಿಕೆಗಳನ್ನು ದನಕರುಗಳಿಗೆ ಕೊಡಿ.<br>➢ ದನಕರುಗಳ ಕೊಟ್ಟಿಗೆಯ ಮೇಲೆ 4-6 ಇಂಚು ಹುಲ್ಲಿನ ಹೊದಿಕೆಯನ್ನು ಹಾಕಿ, ಮದ್ಯಾಹ್ನದಲ್ಲಿ 2-3 ಸಲ ನೀರು ಹೊಡೆಯಬೇಕು ಹಾಗೂ ಕೊಟ್ಟಿಗೆಯ ನೆಲ ಮತ್ತು ಗೋಡೆಗಳಿಗೂ ಸಹ ನೀರು ಹೊಡೆಯಬೇಕು. ಇದರಿಂದ ಕೊಟ್ಟಿಗೆಯು ತಕ್ಕಮಟ್ಟಿಗೆ ತಂಪಾಗಿ ಉಳಿಯುತ್ತದೆ.<br>➢ ಕೊಟ್ಟಿಗೆಯಲ್ಲಿ ಗಾಳಿ ಸರಾಗವಾಗಿ ಆಡುವಂತೆ ವ್ಯವಸ್ಥೆ ಮಾಡಬೇಕು.<br>➢ ಸ್ವಚ್ಛವಾದ ನೀರನ್ನು ಮೇಲಿಂದ ಮೇಲೆ ಕುಡಿಸಬೇಕು.<br>➢ ರಾಸುಗಳನ್ನು ಬಿಸಿಲಿಗೆ ಬಿಡಬಾರದು, ಬೆಳಿಗ್ಗೆ ಅಥವಾ ಸಂಜೆ ವೇಳೆಯಲ್ಲಿ ರಾಸುಗಳನ್ನು ಮೇಯಲು ಬಿಡಬೇಕು. |


**ನೋಡಲ್ ಅಧಿಕಾರಿ:**

ಕೃಷಿ ಹವಾಮಾನ ವಿಭಾಗ

**ಕೃಷಿ ವಿಶ್ವವಿದ್ಯಾನಿಲಯ, ಬೆಂಗಳೂರು**